(ಆ) ಚುಕ್ಕೆ ಗುರ್ತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು

ಶ್ರೀ ಡಿ.ಬಿ. ಚಂದ್ರೇಗೌಡ (ಸಂಸದೀಯ ವ್ಯವಹಾರ ಹಾಗೂ ಕಾನೂನು ಸಚಿವರು);- ಮಾನ್ಯ ಅಧ್ಯಕ್ಷರೇ, ಆರನೇ ಪಟ್ಟಿಯಲ್ಲಿನ ಲಿಖಿತ ಮೂಲಕ ಉತ್ತರಿಸುವ ಒಟ್ಟು 111 ಪ್ರಶ್ನೆಗಳ ಪೈಕಿ 90 ಪ್ರಶ್ನೆಗಳಿಗೆ ಉತ್ತರಗಳನ್ನು ಸದನದಲ್ಲಿ ಮಂಡಿಸುತ್ತಿದ್ದೇನೆ.

ರಾಜ್ಯದ ಅನೇಕ ಹಳ್ಳಿಗಳ ಪ.ಜಾತಿ/ಪ.ಪಂಗಡಗಳ ವಾಸಿಸುವ ಬೀದಿಗಳ ಹಳ್ಳಿಗಳನ್ನು ಮುಚ್ಚುವುದು

666(77) ಶ್ರೀ ಅಂಜನಮೂರ್ತಿ (ನೆಲಮಂಗಲ): ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯ ಅನೇಕ ಹಳ್ಳಿಗಳಲ್ಲಿ ಅದರಲ್ಲೂ ವಿಶೇಷವಾಗಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದವರು ವಾಸಿಸುವ ಹಳ್ಳಿಗಳಲ್ಲಿ ದೊಡ್ಡ ದೊಡ್ಡ ಹಳ್ಳಗಳಿದ್ದು ಅಲ್ಲಿನ ನಿವಾಸಿಗಳು ಅನೇಕ ರೋಗಗಳಿಗೆ ತುತ್ತಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು?

ಡಾ॥ ಎ.ಬಿ. ಮಾಲಕ ರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು);

ಅ) ಇಲ್ಲ

ಆ) ಉದ್ಭವಿಸುವುದಿಲ್ಲ.

ರಾಜ್ಯದ ಗ್ರಾಮಗಳಿಗೆ ಕುಡಿಯುವ ನೀರಿನ ಸೌಲಭ್ಯ

667 (78) ಶ್ರೀ ಅಂಜನಮೂರ್ತಿ (ನೆಲಮಂಗಲ): ಮಾನ್ಯ ಗ್ರಾಮೀಣಾಭಿವೃದ್ಧಿ ಪಂಚಾಯಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವವರೆ?

ಅ) ರಾಜ್ಯದ ಎಷ್ಟು ಗ್ರಾಮಗಳಲ್ಲಿ ಕುಡಿಯುವ ನೀರಿನ ಸೌಲಭ್ಯ ಇರುವುದಿಲ್ಲ; (ತಾಲ್ಲೂಕುವಾರು ವಿವರ ನೀಡುವುದು)

ಆ) ಇಂತಹ ಗ್ರಾಮಗಳಿಗೆ ತ್ವರಿತ ಗತಿಯಲ್ಲಿ ಕುಡಿಯುವ ನೀರನ್ನು ಒದಗಿಸಲು ಸರಕಾರ ಏನುಕ್ರಮ ಕೈಗೋಳ್ಳಲಿದೆ?

ಶ್ರೀ ಎಂ.ವೈ. ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಸಚಿವರು)

ಅ) ರಾಜ್ಯದ ಪ್ರತಿಯೊಂದು ಗ್ರಾಮೀಣ ಜನವಸಲೆಗೂ ಕನಿಷ್ಠ ಒಂದು ಸಾರ್ವಜನಿಕ ಕುಡಿಯುವ ನೀರಿನ ಮೂಲದಿಂದ ನೀರನ ಸೌಲಭ್ಯ ಒದಗಿಸಲಾಗಿದೆ.

ಆ) ರಾಜ್ಯದ ಎಲ್ಲಾ ಜನವಸತಿಗಳಿಗೂ ಸಮರ್ಪಕವಾಗಿ ಅಂದರೆ ದಿನಂಪ್ರತಿ ತಲಾ 55 ಲೀಟರ್‌ಗಳ ಪ್ರಮಾಣ ದಲ್ಲಿ ಸುರಕ್ಷಿತ ಕುಡಿಯುವ ನೀರಿನ ಪೂರೈಕೆಗಾಗಿ ಯೋಜನೆಗಳನ್ನು ರಾಜ್ಯವಲಯ: ಕೇಂದ್ರವಲಯ ಹಾಗು 'ಸಬ್-ಮಿಷನ್' ಕಾರ್ಯಕ್ರಮದಡಿ ಹಂತ ಹಂತವಾಗಿ ಅನುಷ್ಠಾನಗೊಳಿಸಲಾಗುತ್ತಿದೆ.